ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	659 (706)
ಸದಸ್ಯರ ಹೆಸರು	ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	20/12/2021
ಉತ್ತರಿಸುವ ಸಚಿವರು	ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕರ್ನಾಟಕ ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್ ಗಳಲ್ಲಿ ಸುಮಾರು ವರ್ಷಗಳಿಂದ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರುಗಳು ಕೋವಿಡ್-19 ಲಾಕ್ ಡೌನ್ ಸಮಯದಲ್ಲಿ ಬಾಕಿ ವೇತನ ಹಾಗೂ ಇತರೆ ಭತ್ಯೆಗಳ ಬಿಡುಗಡೆಗೆ ಸರ್ಕಾರವು ಸಹಾನುಭೂತಿಯಿಂದ ಕ್ರಮ ಕೈಗೊಳ್ಳುವುದೇ;	ಕರ್ನಾಟಕ ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಸುಮಾರು ವರ್ಷಗಳಿಂದ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರುಗಳಿಗೆ ಕೋವಿಡ್-19ರ ಲಾಕ್‌ಡೌನ್ ಪೂರ್ವದಲ್ಲಿ, ಅಂದರೆ ಮಾರ್ಚ್-2020ರ ಮಾಹೆಯಲ್ಲಿ ಕಾರ್ಯನಿರ್ವಹಿಸಿದ ಅರೆಕಾಲಿಕ ಉಪನ್ಯಾಸಕರಿಗೆ ಏಪ್ರಿಲ್-2020 ರಿಂದ ಆಗಸ್ಟ್-2020ರ ವರೆಗೆ ಅನುದಾನದ ಲಭ್ಯತೆಯ ಮೇರೆಗೆ ಕೋವಿಡ್-19ರ ವಿಶೇಷ ಗೌರವಧನವನ್ನು ಪಾವತಿಸಲಾಗಿರುತ್ತದೆ.
ಆ)	ಅನೇಕ ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ವೇತನ ನೇಮಕಾತಿ ನಿಯಮಗಳಿಂದ ಈಗಾಗಲೇ ಅರೆಕಾಲಿಕ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರುಗಳಿಗೆ ತೊಂದರೆ ಯಾಗುತ್ತಿದ್ದು, ಈ ಲೋಪದೋಷಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳುವುದೇ? (ಮಾಹಿತಿ ಒದಗಿಸುವುದು)	ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಮಾಸಿಕ ಗೌರವಧನವನ್ನು ರೂ. 7500/- ರಿಂದ 12500/- ಕ್ಕೆ ಹೆಚ್ಚಿಸಲಾಗಿದೆ. 2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅನುಗುಣವಾಗಿ ಅಗತ್ಯ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆದುಕೊಳ್ಳಲು ಪ್ರಾಂಶುಪಾಲರಿಗೆ ಅನುಮತಿ ನೀಡಲಾಗಿದೆ. ಅಂತಹ ಸಂದರ್ಭದಲ್ಲಿ ಈ ಹಿಂದೆ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿದ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡಲಾಗಿರುತ್ತದೆ.

ಸಂಖ್ಯೆ: ಇಡಿ 100 ಹೆಚ್‌ಪಿಟಿ 2021)

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು.